ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೀದರ್ ಜಿಲ್ಲೆಯ ಕಾರಂಜಾ ಜಲಾಶಯ ಕುರಿತು

ಶ್ರೀ ವಿಜಯ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

575 (534) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದಲ್ಲಿ ಸಂಗ್ರಹವಾಗಿರುವ ನೀರಿನ ಪ್ರಮಾಣ ಎಷ್ಟು; ಕಳೆದ ಹತ್ತು ವರ್ಷಗಳಲ್ಲಿ ಕಾರಂಜಾ ಜಲಾಶಯದ ನೀರಿನ ಬಳಕೆಯೆಷ್ಟು; (ಕುಡಿಯುವ ನೀರು ಹಾಗೂ ಕೃಷಿ ಬಳಕೆಯ ನೀರಿನ ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದಲ್ಲಿ ನೀರು ಸಂಗ್ರಹಣೆ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾರಂಜಾ ಜಲಾಶಯಕ್ಕೆ ಕೃಷ್ಣ ಅಥವಾ ಗೋದಾವರಿ ನದಿಯ ನೀರನ್ನು ಹರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಬೀದರ್ ಜಿಲ್ಲೆಯ ಕಾರಂಜಾ ಜಲಾಶಯದ ನಿರ್ವಹಣೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಇದರಲ್ಲಿ ಖರ್ಚಾದ ಅನುದಾನ ಎಷ್ಟು? (ವಿವರ ನೀಡುವುದು)